ಇಲಾಖೆ / ವಿಷಯ: DEPARTMENT / SUBJECT: ವಿಧಾನ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER : ಸಂಯುಕ್ತ ಕರ್ನಾಟಕ      ದಿನಾಂಕ : DATE : 03/07/2019

# ಫ್ಯಾಕ್ಸ್ ಮೂಲಕ ರಾಜೀನಾಮೆಗೆ ಸ್ಪೀಕರ್ ಕಿಡಿ

## ಆನಂದ್‌ಸಿಂಗ್ ರಾಜೀನಾಮೆ ಪರಿಶೀಲನೆ

ಬೆಂಗಳೂರು: ತಮ್ಮ ಕಚೇರಿಗೆ ಕೈ ಬರಹದ ರಾಜೀನಾಮೆ ಫ್ಯಾಕ್ಸ್ ಮಾಡಿದ ಮಾಜಿ ಸಚಿವ, ಕಾಂಗ್ರೆಸ್ ಶಾಸಕ ರಮೇಶ್ ಜಾರಕಿಹೊಳಿ ವಿರುದ್ಧ ವಿಧಾನಸಭಾಧ್ಯಕ್ಷ ರಮೇಶ್‌ಕುಮಾರ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.



ರಾಜೀನಾಮೆಯನ್ನು ಫ್ಯಾಕ್ಸ್ ಮೂಲಕ ಕಳುಹಿಸಿದ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದ ಅವರು ನಾನು ಪೋಸ್ಟಲ್ ಡಿಪಾರ್ಟ್‌ಮೆಂಟ್‌ನಲ್ಲಿ ಕೆಲಸ ಮಾಡುತ್ತಿಲ್ಲ. ಸಂವಿಧಾನದ ನೀತಿ ನಿಯಮಗಳನ್ನು ಮೊದಲು ತಿಳಿದಿರಬೇಕು. ಇಲ್ಲಿ ಯಾರ ದೊಡ್ಡಸ್ತಿಕೆಯೂ ನಡೆಯುವುದಿಲ್ಲ. ಮಾಧ್ಯಮಗಳ ಮುಂದೆ ಮಾತನಾಡುವಾಗ ಎಚ್ಚರ ಇರಬೇಕು. ಶಾಸಕರಾದವರಿಗೆ ಭಾಷೆ ಬಳಕೆ ಬಗ್ಗೆ ಗೊತ್ತಿರಬೇಕು ಎಂದು ಹೇಳಿದ್ದಾರೆ. ದನಗಳ ರೀತಿ ನಾನು ವರ್ತನೆ ಮಾಡೋಕೆ ಆಗೋದಿಲ್ಲ. ಇದು ಅಸೆಂಬ್ಲಿಗೆ ಸಂಬಂಧಿಸಿದ ವಿಚಾರ ಎಂದಿದ್ದಾರೆ.

ಆನಂದ್‌ಸಿಂಗ್ ಮಾತ್ರ ದೊಮ್ಮಲೂರಿನ ನನ್ನ ನಿವಾಸಕ್ಕೆ ಬಂದು ರಾಜೀನಾಮೆ ಪತ್ರ ಕೊಟ್ಟಿದ್ದಾರೆ ಎಂದರು. ಅವರ ರಾಜೀನಾಮೆ ಹಿನ್ನೆಲೆಯಲ್ಲಿ ಪಬ್ಲಿಕ್ ಹಿಯರಿಂಗ್ ಮಾಡುತ್ತೇನೆ. ಅವರನ್ನು ಕರೆಸಿ ಮಾತನಾಡುತ್ತೇನೆ. ರಾಜೀನಾಮೆಗೆ ಕಾರಣ ಏನು? ಒತ್ತಡಕ್ಕೆ ಮಣಿದು ರಾಜೀನಾಮೆ ಕೊಟ್ಟಿದ್ದೀರಾ? ಎಂದು ಕೇಳಬೇಕಾಗುತ್ತದೆ ಎಂದರು.

ರಮೇಶ್ ಜಾರಕಿಹೊಳಿ ತಮ್ಮ ಕೈಬರಹದ ರಾಜೀನಾಮೆ ಪತ್ರವನ್ನು ನಿನ್ನೆ ಸ್ಪೀಕರ್ ಕಚೇರಿಗೆ ಫ್ಯಾಕ್ಸ್ ಮೂಲಕ ಕಳುಹಿಸಿದ್ದರು.

ಕಾಂಗ್ರೆಸ್ ಶಾಸಕ ಆನಂದ್‌ಸಿಂಗ್ ರಾಜೀನಾಮೆ ಬಗ್ಗೆ ಸ್ಪೀಕರ್ ಮಂಗಳವಾರ ಪರಿಶೀಲನೆ ನಡೆಸಿದರು. ಇದೇ ಸಂದರ್ಭದಲ್ಲಿ ಸಂಸದೀಯ ವ್ಯವಹಾರ ಸಚಿವ ಕೃಷ್ಣಬೈರೇಗೌಡ ಅವರು ಸ್ಪೀಕರ್ ಅವರನ್ನು ಭೇಟಿಯಾಗಿ ಸಮಾಲೋಚನೆ ನಡೆಸಿದರು.